ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2005 ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕನನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆಯ ನಿಯಮಗಳಿಗೆ ಕೆಲವು ತಿದ್ದುಪಡಿ ತರಲು ಪ್ರಸ್ತಾವ ಮಂಡನೆಗೆ ಕೋರಿಕೆ

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆಯ ನಿಯಮಗಳಿಗೆ ಕೆಲವು ತಿದ್ದುಪಡಿ ತರಲು ಪ್ರಸ್ತಾವ ಮಂಡನೆಗೆ ತಮ್ಮ ಅಪ್ಪಣೆ ಕೋರುತ್ತೇನೆ. ಪ್ರಸ್ತಾವ ಏನೆಂದರೆ, ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಮತ್ತು ನಡವಳಿಕೆಯ ನಿಯಮಗಳನ್ನು ಪರಿಶೀಲಿಸಿ, ಸಲಹೆ ನೀಡಲು ವಿಧಾನ ಸಭೆಯ ನಿಯಮಾವಳಿ ಸಮಿತಿಯನ್ನು ಮಾನ್ಯ ಸಭಾಧ್ಯಕ್ಷರ ಅಧ್ಯಕ್ಷತೆಯಲ್ಲಿ ರಚಿಸಲು ಹಾಗೂ ಈ ಸಮಿತಿಗೆ ಮಾನ್ಯ ಸದಸ್ಯರುಗಳನ್ನು ನೇಮಿಸಲು ಮಾನ್ಯ ಸಭಾಧ್ಯಕ್ಷರವರಿಗೆ ಅಧಿಕಾರ ನೀಡಲು ಈ ಸದನ ಒಪ್ಪಿಗೆ ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಪ್ರಸ್ತಾವ ಏನೆಂದರೆ, ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆಯ ನಿಯಮಗಳನ್ನು ಪರಿಶೀಲಿಸಿ, ಸಲಹೆ ನೀಡಲು ವಿಧಾನ ಸಭೆಯ ನಿಯಮಾವಳಿಯ ಸಮಿತಿಯನ್ನು ರಚಿಸುವಂತೆ ಕೋರಿರುವ ಪ್ರಸ್ತಾವವನ್ನು ಅಂಗೀಕರಿಸಲಾಯಿತು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.
ವರದಿಯನ್ನೊಪ್ಪಿಸುವುದು

ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಅಧ್ಯಕ್ಷರೆ, ನಾನು 2004–05 ನೇ ಸಾಲಿನ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿಯ ಮೊದಲನೇ ವರದಿಯನ್ನು ಸಮಿತಿಯ ಅಧ್ಯಕ್ಷರ ಪರವಾಗಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸಲಾಯಿತು.

ಅಧ್ಯಕ್ಷರು : ಈಗ ವಿತ್ತೀಯ ಕಾರ್ಯಕಲಾಪ

ಶ್ರೀ ಬಿ. ಎಸ್. ಯಡಿಯೂರಪ್ಪ (ವಿರೋಧ ಪಕ್ಷದ ನಾಯಕರು) : ಮಾನ್ಯ